All India Radio: Bangalore
National Bulletin In Kannada
17.11.2026 1.10 PM

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

17.11.2026 1.10 PM

<><><*><><><>

ಮುಖ್ಯಾಂಶಗಳು

೧. ಆಕ್ಟ್ ಈಸ್ಟ್ ನೀತಿಯಿಂದ ಭಾರತ-ಆಸಿಯಾನ್ ರಾಷ್ಟ್ರಗಳ ನಡುವಿನ ಸಂಬಂಧಗಳಿಗೆ ಹೊಸ ವೇಗ - ಪ್ರಧಾನಿ ನರೇಂದ್ರ ಮೋದಿ

೨. ಎರಡು ದಿನಗಳ ಭಾರತ ಪ್ರಾಂತ್ಯ ಕಾಮನ್‌ವೆಲ್ತ್ ಮಹಿಳಾ ಸಂಸದರ ಸಮ್ಮೇಳನಕ್ಕೆ ಬೆಂಗಳೂರಿನಲ್ಲಿ ಲೋಕಸಭಾಧ್ಯಕ್ಷ ಓಂ ಬಿರ್ಲಾ ಚಾಲನೆ

೩. ಕರ್ನಾಟಕವನ್ನು ಜಾಗತಿಕ ತಂತ್ರಜ್ಞಾನ ಕೇಂದ್ರವನ್ನಾಗಿಸಲು ಕ್ರಮ - ಬೆಂಗಳೂರು ತಂತ್ರಜ್ಞಾನ ಶೃಂಗಸಭೆಯಲ್ಲಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್

೪. ಚೀನಾದಲ್ಲಿಂದು ಹಾಂಗ್‌ಕಾಂಗ್ ಬ್ಯಾಡ್ಮಿಂಟನ್ ಟೂರ್ನಿಗೆ ಚಾಲನೆ : ಭಾರತೀಯ ಶಟ್ಲರ್‌ಗಳಿಂದ ಉತ್ತಮ ಪ್ರದರ್ಶನ ನಿರೀಕ್ಷೆ

<><><*><><><>

ಭಾರತದ ಆಕ್ಟ್ ಈಸ್ಟ್ ನೀತಿ, ಭಾರತ ಮತ್ತು ಆಸಿಯಾನ್ ರಾಷ್ಟ್ರಗಳ ನಡುವಿನ ಸಂಬಂಧಗಳಿಗೆ ಹೊಸ ವೇಗ ನೀಡಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದ್ದಾರೆ. ಫಿಲಿಪ್ಪೀನ್ಸ್‌ನ ಮನಿಲಾದಲ್ಲಿ ಇಂದು ನಡೆದ ೨೩ನೇ ಭಾರತ-ಆಸಿಯಾನ್ ಶೃಂಗಸಭೆಯಲ್ಲಿ ಮಾತನಾಡಿದ ಪ್ರಧಾನಿ, ಉಭಯ ರಾಷ್ಟ್ರಗಳ ನಡುವಿನ ಪಾಲುದಾರಿಕೆ ಸಾಂಸ್ಕೃತಿಕ ಪರಂಪರೆಯ ಸಹಭಾಗಿತ್ವವನ್ನು ಮೀರಿ, ಡಿಜಿಟಲ್ ತಂತ್ರಜ್ಞಾನ, ರಕ್ಷಣಾ ಮತ್ತು ಬಾಹ್ಯಾಕಾಶ ಕ್ಷೇತ್ರಗಳಲ್ಲಿಯೂ ಹೊಸ ಆಯಾಮಗಳನ್ನು ಅನ್ವೇಷಿಸುತ್ತಿದೆ ಎಂದು ತಿಳಿಸಿದರು. ೨೦೧೪ರಿಂದ ಜನರ ನಡುವಿನ ಸಂಪರ್ಕವನ್ನು ಬಲಪಡಿಸಲು ೧೦೦ಕ್ಕೂ ಹೆಚ್ಚು ಉಪಕ್ರಮಗಳನ್ನು ಕೈಗೊಳ್ಳಲಾಗಿದೆ. ಭಾರತ ಮತ್ತು ಆಸಿಯಾನ್ ರಾಷ್ಟ್ರಗಳ ನಡುವಿನ ನೇರ ವಿಮಾನಯಾನ ಹಾಗೂ ಪ್ರವಾಸೋದ್ಯಮದ ಬೆಳವಣಿಗೆ ಪರಸ್ಪರ ಬಾಂಧವ್ಯ ವೃದ್ಧಿಗೆ ಸಾಕ್ಷಿಯಾಗಿದೆ ಎಂದು ಪ್ರಧಾನಿ ಹೇಳಿದರು.

<><><*><><><>

ಇಂದಿನಿಂದ ಎರಡು ದಿನಗಳ ಕಾಲ ನಡೆಯುವ ಭಾರತ ಪ್ರಾಂತ್ಯದ ಕಾಮನ್‌ವೆಲ್ತ್ ಮಹಿಳಾ ಸಂಸದರ ಸಮ್ಮೇಳನವನ್ನು ಬೆಂಗಳೂರಿನ ವಿಧಾನಸೌಧದಲ್ಲಿಂದು ಲೋಕಸಭಾಧ್ಯಕ್ಷ ಓಂ ಬಿರ್ಲಾ ಉದ್ಘಾಟಿಸಿದರು. ಸಮಾರಂಭದಲ್ಲಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ರಾಜ್ಯಸಭೆಯ ಉಪಸಭಾಪತಿ ಹರಿವಂಶ್, ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್, ವಿಧಾನಸಭೆಯ ಸಭಾಧ್ಯಕ್ಷ ಜಿ.ಎಸ್.ಪಾಟೀಲ್ ಮತ್ತು ಸಿಡಬ್ಲ್ಯೂಪಿ ಭಾರತ ಪ್ರಾಂತ್ಯದ ಅಧ್ಯಕ್ಷರಾದ ದಗ್ಗುಬಾಟಿ ಪುರಂದರೇಶ್ವರಿ ಉಪಸ್ಥಿತರಿದ್ದಾರೆ. ಸಂಸತ್ತು ಸದಸ್ಯರು ಮತ್ತು ರಾಜ್ಯ, ಕೇಂದ್ರಾಡಳಿತ ಪ್ರದೇಶಗಳ ವಿಧಾನಮಂಡಲಗಳ ಮಹಿಳಾ ಶಾಸಕರು ಸಮ್ಮೇಳನದಲ್ಲಿ ಭಾಗವಹಿಸಿದ್ದಾರೆ. ನಾಳೆ ರಾಜ್ಯಪಾಲರಾದ ಡಾ.ಸುಧಾ ಯಾದವ್ ಅವರ ಸಮಾರೋಪ ಭಾಷಣದೊಂದಿಗೆ ಸಮ್ಮೇಳನ ಸಂಪನ್ನಗೊಳ್ಳಲಿದೆ.

<><><*><><><>

ಕರ್ನಾಟಕವನ್ನು ಕೃತಕ ಬುದ್ಧಿಮತ್ತೆ, ಡೀಪ್ ಟೆಕ್, ಸೆಮಿಕಂಡಕ್ಟರ್ ಉತ್ಪಾದನೆ ಮತ್ತು ಜೈವಿಕ ತಂತ್ರಜ್ಞಾನ ಕ್ಷೇತ್ರಗಳಲ್ಲಿ ಜಾಗತಿಕ ಕೇಂದ್ರವನ್ನಾಗಿ ರೂಪಿಸಲಾಗುತ್ತಿದೆ ಎಂದು ಕರ್ನಾಟಕ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು 'ಕೃತಕ ಬುದ್ಧಿಮತ್ತೆ ಮತ್ತು ಅದರಾಚೆಗೆ' ಎಂಬ ಧ್ಯೇಯವಾಕ್ಯದೊಂದಿಗೆ ಆರಂಭವಾದ ೨೯ನೇ ಆವೃತ್ತಿಯ ಬೆಂಗಳೂರು ತಂತ್ರಜ್ಞಾನ ಶೃಂಗಸಭೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು. ಪ್ರಗತಿಪರ ನೀತಿಗಳು, ಸದೃಢ ಸಂಶೋಧನಾ ಸಂಸ್ಥೆಗಳು, ಸಮೃದ್ಧ ನವೋದ್ಯಮ ಪರಿಸರ ವ್ಯವಸ್ಥೆ ಮತ್ತು ನುರಿತ ಮಾನವ ಸಂಪನ್ಮೂಲಗಳ ಬೆಂಬಲದೊಂದಿಗೆ ರಾಜ್ಯವು ಜಾಗತಿಕ ನಾವೀನ್ಯತೆಯಲ್ಲಿ ಮುಂಚೂಣಿಯಲ್ಲಿದೆ ಎಂದ ಅವರು, ೨೦೨೫-೨೬ನೇ ಸಾಲಿನ ಮೊದಲಾರ್ಧದಲ್ಲಿ ರಾಜ್ಯಕ್ಕೆ ೯.೪ ಶತಕೋಟಿ ಡಾಲರ್ ವಿದೇಶಿ ನೇರ ಹೂಡಿಕೆ ಹರಿದುಬಂದಿದ್ದು, ಬೆಂಗಳೂರಿನಲ್ಲಿ ೧ ಸಾವಿರಕ್ಕೂ ಹೆಚ್ಚು ಜಾಗತಿಕ ಸಾಮರ್ಥ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ ಎಂದು ತಿಳಿಸಿದರು. ರಾಜ್ಯದಲ್ಲಿ ೨೪ ಸಾವಿರಕ್ಕೂ ಹೆಚ್ಚು ಮಾನ್ಯತೆ ಪಡೆದ ನವೋದ್ಯಮಗಳಿದ್ದು, ಭಾರತದ ಪ್ರತಿ ೫ ಯುನಿಕಾರ್ನ್‌ಗಳಲ್ಲಿ ೨ ಕರ್ನಾಟಕದಿಂದಲೇ ಮೂಡಿಬಂದಿವೆ. ಮಹಿಳಾ ಸಂಸ್ಥಾಪಕರು ೧೩.೪ ಶತಕೋಟಿ ಡಾಲರ್ ನಿಧಿ ಸಂಗ್ರಹಿಸಿದ್ದು, ದೇಶದ ಮೊದಲ ಸರ್ಕಾರಿ ಎಐ ವಿಶ್ವವಿದ್ಯಾಲಯ ಹಾಗೂ 'ಬೆಂಗಳೂರು ರೋಬೋಟಿಕ್ಸ್ ಮತ್ತು ಎಐ ನಾವೀನ್ಯತಾ ವಲಯ' ಸ್ಥಾಪನೆಗೆ ಕ್ರಮ ಕೈಗೊಳ್ಳಲಾಗಿದೆ ಎಂದು ಮುಖ್ಯಮಂತ್ರಿ ಮಾಹಿತಿ ನೀಡಿದರು.

<>><><*><><><>

ನವದೆಹಲಿಯಲ್ಲಿಂದು ನಡೆದ ಭಾರತೀಯ ವೈದ್ಯಕೀಯ ಸಂಶೋಧನಾ ಮಂಡಳಿಯ ರಾಷ್ಟ್ರೀಯ ಮಲೇರಿಯಾ ಸಂಶೋಧನಾ ಸಂಸ್ಥೆಯ ಸುವರ್ಣ ಮಹೋತ್ಸವದ ಉದ್ಘಾಟನಾ ಸಮಾರಂಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಪಾಲ್ಗೊಂಡರು. ಮಲೇರಿಯಾ ಮತ್ತು ಸಂಬಂಧಿತ ಕ್ಷೇತ್ರಗಳಲ್ಲಿ ಸಂಸ್ಥೆಯ ಐದು ದಶಕಗಳ ಸಂಶೋಧನೆ ಹಾಗೂ ಸಾಧನೆಗಳನ್ನು ಸ್ಮರಿಸುವ ಉದ್ದೇಶದಿಂದ ವರ್ಷವಿಡೀ ನಡೆಯುವ ಕಾರ್ಯಕ್ರಮಗಳಿಗೆ ಚಾಲನೆ ನೀಡಲಾಯಿತು. ಈ ಸಂದರ್ಭದಲ್ಲಿ ರಾಷ್ಟ್ರಪತಿಗಳು ಸ್ಮರಣಾರ್ಥ ಅಂಚೆ ಚೀಟಿಗಳ ಕೈಪಿಡಿಯನ್ನು ಬಿಡುಗಡೆ ಮಾಡಿದರು. ಜೊತೆಗೆ ಸಂಸ್ಥೆಯ ಐದು ದಶಕಗಳ ಸಾಧನೆಗಳನ್ನು ದಾಖಲಿಸುವ ಪುಸ್ತಕ ಹಾಗೂ 'ಎನ್‌ಐಎಂಆರ್@೫೦: ವಿಜ್ಞಾನ, ಸೇವೆ ಮತ್ತು ಪ್ರಭಾವದ ಐದು ದಶಕಗಳು' ಎಂಬ ಕೃತಿಯನ್ನೂ ಬಿಡುಗಡೆ ಮಾಡಲಾಯಿತು.

<>><><*><><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಸಾರ್ವಜನಿಕ ಸೇವೆಯಲ್ಲಿ ೨೫ ವರ್ಷ ಪೂರ್ಣಗೊಳಿಸಿರುವ ಹಿನ್ನೆಲೆಯಲ್ಲಿ, ಅವರ ಆಡಳಿತ ಅನುಭವಗಳಿಂದ ಪಾಠಗಳನ್ನು ಪಡೆದುಕೊಳ್ಳುವ ಉದ್ದೇಶದಿಂದ ನೀತಿ ಆಯೋಗ ನವದೆಹಲಿಯ ಭಾರತ್ ಮಂಟಪದಲ್ಲಿ ಇಂದು 'ಗುರಿಯಾಗಿ ನಾಯಕತ್ವ' ವಿಷಯದ ಮೊದಲ ರಾಷ್ಟ್ರೀಯ ಕಾರ್ಯಾಗಾರವನ್ನು ಆಯೋಜಿಸಿತು. ಐದು ಕಾರ್ಯಾಗಾರಗಳ ಸರಣಿಯ ಭಾಗವಾಗಿ ನಡೆಯುತ್ತಿರುವ ಈ ಕಾರ್ಯಕ್ರಮದಲ್ಲಿ, ೨೦೦೧ರ ಕಚ್ ಭೂಕಂಪದ ನಂತರದ ಪುನರ್‌ನಿರ್ಮಾಣ, ಕೋವಿಡ್ ನಿರ್ವಹಣೆ, ಲಕ್‌ಪತಿ ದೀದಿ ಯೋಜನೆ ಮತ್ತು ಬಾಹ್ಯಾಕಾಶ ಕ್ಷೇತ್ರದಲ್ಲಿನ ಸುಧಾರಣೆ ಸೇರಿದಂತೆ ಪ್ರಮುಖ ಆಡಳಿತಾತ್ಮಕ ಉಪಕ್ರಮಗಳ ಅನುಭವಗಳನ್ನು ಹಂಚಿಕೊಳ್ಳಲಾಯಿತು. ಪ್ರಧಾನಮಂತ್ರಿಗಳ ಪ್ರಧಾನ ಕಾರ್ಯದರ್ಶಿ ಡಾ. ಪಿ.ಕೆ.ಮಿಶ್ರಾ ಮತ್ತು ನೀತಿ ಆಯೋಗದ ಉಪಾಧ್ಯಕ್ಷ ಅಶೋಕ್ ಕುಮಾರ್ ಲಹಿರಿ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದ ಅಶೋಕ್ ಕುಮಾರ್ ಲಹಿರಿ, ೨೦೪೭ರ ವೇಳೆಗೆ ವಿಕಸಿತ ಭಾರತ ನಿರ್ಮಾಣದ ಗುರಿ ಸಾಧಿಸಲು ವಾರ್ಷಿಕ ಶೇಕಡಾ ೭ರಿಂದ ೧೦ರಷ್ಟು ನೈಜ ಜಿಡಿಪಿ ಬೆಳವಣಿಗೆ ಅಗತ್ಯವಿದೆ ಎಂದು ಹೇಳಿದರು. ದೇಶದ ಸ್ವಾತಂತ್ರ್ಯದ ಶತಮಾನೋತ್ಸವದ ವೇಳೆಗೆ ೫೦ರಿಂದ ೪೦ ಟ್ರಿಲಿಯನ್ ಡಾಲರ್ ಆರ್ಥಿಕತೆಯನ್ನು ಸಾಧಿಸುವ ಗುರಿ ಹೊಂದಲಾಗಿದೆ ಎಂದು ತಿಳಿಸಿದರು.

<>><><*><><><>

ಡೀಸೆಲ್ ಮತ್ತು ವಿಮಾನ ಇಂಧನ ರಫ್ತುಗಳ ಮೇಲಿನ ಅನಿರೀಕ್ಷಿತ ತೆರಿಗೆಯನ್ನು ಕೇಂದ್ರ ಸರ್ಕಾರ ಹೆಚ್ಚಿಸಿದೆ. ಡೀಸೆಲ್ ರಫ್ತು ಮೇಲಿನ ರಸ್ತೆ ಮತ್ತು ಮೂಲಭೂತ ಸೌಕರ್ಯಗಳ ಸೆಸ್ ಒಳಗೊಂಡ ವಿಶೇಷ ಹೆಚ್ಚುವರಿ ಅಬಕಾರಿ ಶುಲ್ಕವನ್ನು ಪ್ರತಿ ಲೀಟರ್‌ಗೆ ೧೧ ರೂಪಾಯಿ ೫೦ ಪೈಸೆಯಿಂದ ೧೪ ರೂಪಾಯಿಗೆ ಹೆಚ್ಚಿಸಲಾಗಿದೆ ಎಂದು ಹಣಕಾಸು ಸಚಿವಾಲಯ ತಿಳಿಸಿದೆ. ವಿಮಾನ ಇಂಧನ ರಫ್ತಿನ ಮೇಲಿನ ಸುಂಕವನ್ನು ಪ್ರತಿ ಲೀಟರ್‌ಗೆ ೧೧ ರೂಪಾಯಿ ೧೨ ಪೈಸೆಯಿಂದ ೧೧ ರೂಪಾಯಿ ೫೦

ಪೈಸೆಗೆ ಏರಿಸಲಾಗಿದೆ. ಪೆಟ್ರೋಲ್ ರಫ್ತಿನ ಮೇಲಿನ ಸುಂಕವನ್ನು ಎರಡನೇ ಬಾರಿಯ ಪರಿಷ್ಕರಣೆಯ ನಂತರವೂ ಹದಿನೈದು ದಿನಗಳ ಅವಧಿಗೂ ಶೂನ್ಯದಲ್ಲೇ ಮುಂದುವರಿಸಲಾಗಿದೆ. ಪರಿಷ್ಕೃತ ದರಗಳು ನಿನ್ನೆಯಿಂದಲೇ ಜಾರಿಗೆ ಬಂದಿವೆ.

<>><><*><><><>

ಉತ್ತರಾಖಂಡದಲ್ಲಿ ಕಳೆದ ೧೨ ಗಂಟೆಗಳಲ್ಲಿ ಸಂಭವಿಸಿದ ಎರಡು ಪ್ರತ್ಯೇಕ ರಸ್ತೆ ಅಪಘಾತಗಳಲ್ಲಿ ೧೨ ಮಂದಿ ಮೃತಪಟ್ಟಿದ್ದು, ೩೧ ಜನರು ಗಾಯಗೊಂಡಿದ್ದಾರೆ. ಟೆಹ್ರಿ ಜಿಲ್ಲೆಯ ಗುಲಾರ್ ಸಮೀಪ ಹರಿದ್ವಾರದಿಂದ ಬದರಿನಾಥಕ್ಕೆ ತೆರಳುತ್ತಿದ್ದ ಪ್ರಯಾಣಿಕರ ಬಸ್ ಇಂದು ಬೆಳಿಗ್ಗೆ ಸುಮಾರು ೧೦೦ ಮೀಟರ್ ಆಳದ ಕಂದಕಕ್ಕೆ ಉರುಳಿಬಿದ್ದ ಪರಿಣಾಮ ೮ ಮಂದಿ ಮೃತಪಟ್ಟಿದ್ದು, ೨೫ ಜನರು ಗಾಯಗೊಂಡಿದ್ದಾರೆ. ಗಾಯಾಳುಗಳನ್ನು ರಿಷಿಕೇಶದ ಏಮ್ಸ್ ಮತ್ತು ಸರ್ಕಾರಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಇನ್ನೊಂದು ಘಟನೆಯಲ್ಲಿ ರುದ್ರಪ್ರಯಾಗ ಜಿಲ್ಲೆಯ ಕ್ಯುಂಜಾ ಕಣಿವೆಯ ಕಂಡಾರಾ ರಸ್ತೆಯಲ್ಲಿ ವಿವಾಹ ಸಮಾರಂಭದಿಂದ ಹಿಂದಿರುಗುತ್ತಿದ್ದ ವಾಹನ ಕಂದಕಕ್ಕೆ ಬಿದ್ದ ಪರಿಣಾಮ ನಾಲ್ವರು ಮೃತಪಟ್ಟಿದ್ದು, ಆರು ಮಂದಿ ಗಾಯಗೊಂಡಿದ್ದಾರೆ. ಅಪಘಾತದ ಕಾರಣ ಕುರಿತು ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ಉತ್ತರಾಖಂಡದ ಟೆಹ್ರಿ ಗರ್ವಾಲ್ ಜಿಲ್ಲೆಯಲ್ಲಿ ಸಂಭವಿಸಿದ ರಸ್ತೆ ಅಪಘಾತದಲ್ಲಿ ಜೀವಹಾನಿಯಾಗಿರುವುದಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು ಹಾಗೂ ಪ್ರಧಾನಮಂತ್ರಿ ನರೇಂದ್ರ ಮೋದಿ ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ. ಮೃತರ ಕುಟುಂಬಗಳಿಗೆ ಸಾಂತ್ವನ ತಿಳಿಸಿರುವ ಅವರು, ಗಾಯಾಳುಗಳು ಶೀಘ್ರ ಗುಣಮುಖರಾಗಲಿ ಎಂದು ಪ್ರಾರ್ಥಿಸಿದ್ದಾರೆ.

<>><><*><><><>

ಸ್ವಾತಂತ್ರ್ಯ ಹೋರಾಟಗಾರ ಪಂಜಾಬ್ ಕೇಸರಿ ಲಾಲಾ ಲಜಪತ್ ರಾಯ್ ಅವರ ಹುತಾತ್ಮ ದಿನದ ಅಂಗವಾಗಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಹಾಗೂ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಗೌರವ ನಮನ ಸಲ್ಲಿಸಿದ್ದಾರೆ.

<>><><*><><><>

ಆಂಧ್ರಪ್ರದೇಶದ ಡಾ. ಬಿ.ಆರ್. ಅಂಬೇಡ್ಕರ್ ಕೋನಸೀಮಾ ಜಿಲ್ಲೆಯ ಗೆಡ್ಡಾಡ ಗ್ರಾಮದ ಸಮೀಪದಲ್ಲಿರುವ ತೈಲ ಮತ್ತು ನೈಸರ್ಗಿಕ ಅನಿಲ ನಿಗಮದ ಅನಿಲ ಬಾವಿಯಲ್ಲಿ ಇಂದು ಬೆಳಗಿನ ಜಾವ ಭಾರೀ ಅನಿಲ ಸೋರಿಕೆ ಸಂಭವಿಸಿದೆ. ಈ ಹಿನ್ನೆಲೆ ಸುತ್ತಮುತ್ತಲಿನ ಗ್ರಾಮಗಳಲ್ಲಿ ಆತಂಕದ ವಾತಾವರಣ ನಿರ್ಮಾಣವಾಗಿದೆ. ಮುನ್ನೆಚ್ಚರಿಕಾ ಕ್ರಮವಾಗಿ ಅನಿಲ ಬಾವಿಯ ಒಂದು ಕಿಲೋಮೀಟರ್ ವ್ಯಾಪ್ತಿಯ ನಿವಾಸಿಗಳನ್ನು ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಲಾಗಿದೆ. ರಾಷ್ಟ್ರೀಯ ಹೆದ್ದಾರಿ ೨೧೬ರಲ್ಲಿ ವಾಹನ ಸಂಚಾರ ಸ್ಥಗಿತಗೊಳಿಸಲಾಗಿದೆ.

<>><><*><><><>

ಚೀನಾದಲ್ಲಿಂದು ಹಾಂಗ್‌ಕಾಂಗ್ ಬ್ಯಾಡ್ಮಿಂಟನ್ ಟೂರ್ನಿಗೆ ಚಾಲನೆ ದೊರೆತಿದೆ. ಮೊದಲಿಗೆ ಅರ್ಹತಾ ಸುತ್ತಿನ ಪಂದ್ಯಗಳು ನಡೆಯುತ್ತಿದ್ದು, ಮಿಶ್ರ ಡಬಲ್ಸ್‌ನಲ್ಲಿ ಭಾರತದ ರಾಧಿಕಾ ಶರ್ಮಾ ಮತ್ತು ಧ್ರುವ್ ಕಪಿಲಾ ಜೋಡಿ ಗೆಲುವು ದಾಖಲಿಸಿದೆ. ಇಂದು ಮಧ್ಯಾಹ್ನ ನಡೆಯಲಿರುವ ಪುರುಷರ ಡಬಲ್ಸ್ ವಿಭಾಗದ ೩೨ರ ಸುತ್ತಿನ ಪಂದ್ಯದಲ್ಲಿ ಭಾರತದ ಚಿರಾಗ್ ಶೆಟ್ಟಿ ಮತ್ತು ಸಾತ್ವಿಕ್ ಸಾಯಿರಾಜ್ ರಾಂಕಿರೆಡ್ಡಿ ಜೋಡಿ ಕಣಕ್ಕಿಳಿಯಲಿದೆ. ಪುರುಷರ ಸಿಂಗಲ್ಸ್ ವಿಭಾಗದಲ್ಲಿ ಭಾರತದ ತಾರಾ ಶೆಟ್ಲರ್‌ಗಳಾದ ಕಿಡಂಬಿ ಶ್ರೀಕಾಂತ್ ಮತ್ತು ಲಕ್ಷ್ಯಸೇನ್ ನಾಳೆ ಕಣಕ್ಕಿಳಿಯಲಿದ್ದಾರೆ. ಮಹಿಳಾ ಸಿಂಗಲ್ಸ್‌ನಲ್ಲೂ ಭಾರತದ ರಕ್ಷಿತಾ ರಾಮ್‌ರಾಜ್, ದೇವಿಕಾ ಸಿಹಾಗ್, ಅನ್‌ಮೋಲ್ ಖಾರ್ಬ್, ಉನ್ನತಿ ಹೂಡಾ, ಅಶ್ಮಿತಾ ಚಲಿಹಾ ಮತ್ತು ಇಶಾ ರಾಣೆ ಬರುವಾ ತಮ್ಮ ತಮ್ಮ ಪಂದ್ಯಗಳಲ್ಲಿ ನಾಳೆ ಕಣಕ್ಕಿಳಿಯಲಿದ್ದಾರೆ.

ಇನ್ನು ಮಿಶ್ರ ಡಬಲ್ಸ್‌ನಲ್ಲಿ ನಾಳೆ ನಡೆಯಲಿರುವ ೩೨ರ ಸುತ್ತಿನ ಪಂದ್ಯದಲ್ಲಿ ಭಾರತದ ಮನಿಶಾ ಕೆ ಮತ್ತು ಧ್ರುವ್ ರಾವತ್ ಜೋಡಿ ಕಣಕ್ಕಿಳಿಯುತ್ತಿದೆ.

<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>